**<u>ಕರ್ನಾಟಕ ವಿಧಾನ ಪರಿಷತ್ತು</u>**

| | | | |
|---|---|---|---|
| **1.** | **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | **:** | **686 (719)** |
| 2. | ಮಾನ್ಯ ಸದಸ್ಯರ ಹೆಸರು | : | ಶ್ರೀ ಶಿವಕುಮಾರ್ ಕೆ.<br>(ನಾಮನಿರ್ದೇಶಿತರ ಕ್ಷೇತ್ರದಿಂದ ಚುನಾಯಿತರಾದವರು) |
| 3. | ಉತ್ತರಿಸುವ ದಿನಾಂಕ | : | 21.08.2026 |
| 4. | ಉತ್ತರಿಸುವ ಸಚಿವರು | : | ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರಗಳು |
|---|---|---|
| ಅ) | ಕೋಲಾರ ಜಿಲ್ಲೆಗೆ ಸರ್ಕಾರಿ ವೈದ್ಯಕೀಯ ಕಾಲೇಜು ಮಂಜೂರಾತಿ ಮಾಡಿದ್ದು, ಯಾವಾಗ; ಈ ಕಾಮಗಾರಿ ಯಾವಾಗ ಪ್ರಾರಂಭವಾಗುತ್ತದೆ; | 2025-26ನೇ ಸಾಲಿನ ಆಯವ್ಯಯ ಘೋಷಣೆಯಂತೆ ಕೋಲಾರದಲ್ಲಿ ಸಾರ್ವಜನಿಕ ಖಾಸಗಿ ಸಹಭಾಗಿತ್ವದ ಆಧಾರದಲ್ಲಿ ವೈದ್ಯಕೀಯ ಕಾಲೇಜನ್ನು ಆರಂಭಿಸಲು ಉದ್ದೇಶಿಸಲಾಗಿತ್ತು. ದಿನಾಂಕ: 20.06.2025 ರಲ್ಲಿ ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯದ Inspection Committee ಯು ಕೋಲಾರ ಜಿಲ್ಲೆ, ಹಾಗೂ ತಾಲ್ಲೂಕು ಛಕಂಬಳ್ಳಿ ಗ್ರಾಮದ ಸರ್ವೆ ನಂ.19 ರಲ್ಲಿ 22 ಎಕರೆ 20 ಗುಂಟೆ ಜಮೀನನ್ನು ಗುರುತಿಸಲಾಗಿತ್ತು. ಈ ಜಾಗವು ಕೋಲಾರ ಜಿಲ್ಲಾಸ್ಪತ್ರೆಗೆ ಸುಮಾರು 8.5 ಕಿ.ಮೀ ದೂರದಲ್ಲಿದೆ.<br><br>ಆದರೆ, ತದನಂತರ 2026-27ನೇ ಸಾಲಿನ ಆಯವ್ಯಯದಲ್ಲಿ ಕೋಲಾರದಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜನ್ನು ಸ್ಥಾಪಿಸಲು ವಿಸ್ತೃತ ಯೋಜನಾ ವರದಿಯನ್ನು ತಯಾರಿಸಲಾಗುವುದು ಎಂದು ಘೋಷಿಸಲಾಗಿರುತ್ತದೆ.<br><br>ಉದ್ದೇಶಿತ ವೈದ್ಯಕೀಯ ಕಾಲೇಜನ್ನು ಸ್ಥಾಪಿಸಲು ಕೋಲಾರ ಜಿಲ್ಲೆ ಮತ್ತು ತಾಲ್ಲೂಕಿನ ಗಾಜಲದಿನ್ನೆ ಗ್ರಾಮದ ಸರ್ವೆ ನಂ.12 ರಲ್ಲಿ 22 ಎಕರೆ 36 ಗುಂಟೆ ವಿಸ್ತೀರ್ಣದ ಜಮೀನನ್ನು ಗುರುತಿಸಲಾಗಿರುತ್ತದೆ. ಸದರಿ ಜಾಗವು ಕೋಲಾರ ಜಿಲ್ಲಾಸ್ಪತ್ರೆಗೆ ಸುಮಾರು 2.2 ಕೀ.ಮಿ ದೂರದಲ್ಲಿದ್ದು. ಸದರಿ ಪ್ರದೇಶದಲ್ಲಿದ್ದ ಕೆ.ಎನ್.ಟಿ.ಬಿ. ಸ್ಯಾನಿಟೋರಿಯಂ ಕ್ಷಯ ರೋಗ ಆಸ್ಪತ್ರೆ 2007ನೇ ಸಾಲಿನಲ್ಲಿ ಎಸ್.ಎನ್.ಆರ್. ಜಿಲ್ಲಾ ಆಸ್ಪತ್ರೆಗೆ ಜೋಡಣೆಯಾದ ಕಾರಣ ಸದರಿ ಪ್ರದೇಶವನ್ನು ಸರ್ಕಾರಿ ವೈದ್ಯಕೀಯ ಕಾಲೇಜನ್ನು ಸ್ಥಾಪಿಸಲು ಗುರುತಿಸಲಾಗಿರುತ್ತದೆ.<br><br>ಆದರೆ, ಪ್ರಸ್ತಾಪಿತ ಜಮೀನು ಅರಣ್ಯ ಇಲಾಖೆಯ ಜಮೀನಾಗಿರುವುದರಿಂದ ಸದರಿ ಜಾಗವನ್ನು ಅರಣ್ಯ |
| ಆ) | ಸರ್ಕಾರಿ ವೈದ್ಯಕೀಯ ಕಾಲೇಜಿಗೆ ಬೇಕಾದ ಸೂಕ್ತವಾದ ಜಾಗ ಗುರುತಿಸಲಾಗಿದೆಯೇ; ಈ ಜಾಗವನ್ನು ಇಲಾಖೆಗೆ ಹಸ್ತಾಂತರಿಸಲಾಗಿದೆಯೇ; | |

| | | |
|---|---|---|
| | | ಇಲಾಖೆಯಿಂದ ಆರೋಗ್ಯ ಇಲಾಖೆಗೆ ಪಡೆಯಲು ಸದರಿ ಜಮೀನಿನ ಬದಲಾಗಿ ಕೋಲಾರ ತಾಲ್ಲೂಕಿನ ಸುಗಟೂರು ಹೋಬಳಿಯ ಮದನಹಳ್ಳಿ ಗ್ರಾಮದ ಸರ್ವೆ ನಂ. 125 ರಲ್ಲಿ 22 ಎಕರೆ 36 ಗುಂಟೆ ವಿಸ್ತೀರ್ಣದ ಕಂದಾಯ ಇಲಾಖೆಯ ಜಮೀನನ್ನು ಒದಗಿಸಿ ನಿಯಮಾನುಸಾರ **"ಪರಿವೇಶ್ ಪೋರ್ಟಲ್"** ನಲ್ಲಿ ಮುಂದಿನ ಪ್ರಕ್ರಿಯೆಗಾಗಿ ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಲಾಗಿರುತ್ತದೆ.<br><br>ಮುಂದುವರೆದು, ದಿನಾಂಕ: 12.08.2026 ರಂದು, ಜಿಲ್ಲಾಧಿಕಾರಿಗಳು. ಕೋಲಾರ ಜಿಲ್ಲೆ ರವರು ಕೋಲಾರ ಜಿಲ್ಲೆ ಮತ್ತು ತಾಲ್ಲೂಕಿನ ಗಾಜಲದಿನ್ನೆ ಗ್ರಾಮದ ಸರ್ವೆ ನಂ.12 ರಲ್ಲಿ 22 ಎಕರೆ 36 ಗುಂಟೆ ವಿಸ್ತೀರ್ಣದ ಜಮೀನಿನಲ್ಲಿ 4.5 ಹೆಕ್ಟೇರ್ (ಸುಮಾರು 11.12 ಎಕರೆ) ಅರಣ್ಯ ಭೂಮಿಯನ್ನು ಅರಣ್ಯೇತರ ಉದ್ದೇಶಕ್ಕೆ ಬಳಸಿಕೊಳ್ಳಲು / ಭೂ ಉಪಯೋಗ ಬದಲಾವಣೆ / ಪರಿವರ್ತನೆ ಪ್ರಸ್ತಾವನೆಯನ್ನು "ಪರಿವೇಶ್ ಪೋರ್ಟಲ್" (PARIVESH Portal) ಮೂಲಕ ಮುಂದಿನ ಅನುಮೋದನೆಗಾಗಿ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ (PCCF) ಸಲ್ಲಿಸಿರುತ್ತಾರೆ.<br><br>ಸದರಿ ಜಮೀನು ಅರಣ್ಯ ಇಲಾಖೆಯ ಅಧೀನದಲ್ಲಿದ್ದು, ಈವರೆಗೂ ವೈದ್ಯಕೀಯ ಶಿಕ್ಷಣ ಇಲಾಖೆಗೆ ಹಸ್ತಾಂತರವಾಗಿರುವುದಿಲ್ಲ. |
| ಇ) | ಸದರಿ ಕಾಲೇಜನ್ನು ಯಾವ ಶೈಕ್ಷಣಿಕ ವರ್ಷದಲ್ಲಿ ಪ್ರಾರಂಭಿಸಲಾಗುವುದು; ಇಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ಪ್ರವೇಶಾತಿ ನೀಡಲಾಗುವುದು? | ಪ್ರಸ್ತಾಪಿತ ಜಮೀನು ಅರಣ್ಯ ಇಲಾಖೆಯಿಂದ ವೈದ್ಯಕೀಯ ಶಿಕ್ಷಣ ಇಲಾಖೆಗೆ ಹಸ್ತಾಂತರಗೊಂಡ ನಂತರ ಹಾಗೂ ರಾಷ್ಟ್ರೀಯ ವೈದ್ಯಕೀಯ ಆಯೋಗದ (NMC) ಪರಿವೀಕ್ಷಣೆಯ ನಂತರ, 100 ವಿದ್ಯಾರ್ಥಿಗಳಿಗೆ ಪ್ರವೇಶಾತಿ ನೀಡಲು ಅನುಕೂಲವಾಗುವಂತೆ ನಿಯಮಾನುಸಾರ ಕ್ರಮ ವಹಿಸಲಾಗುವುದು. |

**ಸಂಖ್ಯೆ:** ಎಂಇಡಿ 492 ಎಂಎಂಸಿ 2026

**(ಡಾ. ಶರಣಪ್ರಕಾಶ ಆರ್. ಪಾಟೀಲ್)**
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು.